40

ಕರ್ನಾಟಕ ಸರ್ಕಾರ

ಸಂಖ್ಯೆ: ಆಕುಕ 11134 ಎಂಇ-ಬಿ 2015

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 12-02-2015.

**ಇವರಿಂದ:**
ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
(ವೈದ್ಯಕೀಯ ಶಿಕ್ಷಣ)
ವಿಕಾಸ ಸೌಧ, ಬೆಂಗಳೂರು-560001.

**ಇವರಿಗೆ:**
ನಿರ್ದೇಶಕರು,
ಬೆಳಗಾವಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ,
ಬೆಳಗಾವಿ- 590001.

**ಮಾನ್ಯರೆ,**

**ವಿಷಯ:** ಬಿಮ್ಸ್ ಸಂಸ್ಥೆಯಲ್ಲಿ ಆರ್ಥಿಕ ಸಲಹೆಗಾರರ ಹುದ್ದೆಯನ್ನು ರಾಜ್ಯ ಲೆಕ್ಕ ಪತ್ರ ಇಲಾಖೆಯ ವೃಂದ ಬಲಕ್ಕೆ ಸೇರ್ಪಡೆ ಮಾಡುವ ಬಗ್ಗೆ.

**ಉಲ್ಲೇಖ:** ಸರ್ಕಾರಿ ಆದೇಶ ಸಂಖ್ಯೆ: ಆಇ 19 ರಾಲೆಪ 2014, ದಿನಾಂಕ: 06.12.2014

**--**

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಆದೇಶದ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದೆ. ಈ ಆದೇಶವನ್ನು ಸಂಸ್ಥೆಯ ವೆಬ್-ಸೈಟ್‌ನಲ್ಲಿ ಅಳವಡಿಸಿಕೊಳ್ಳುವಂತೆ ತಮಗೆ ತಿಳಿಸಲು ನಿರ್ದೇಶಿತಳಾಗಿದ್ದೇನೆ.

ನಿಮ್ಮ ನಂಬುಗೆಯ,

12/2/15

(ಎಸ್.ಕೆ.ನಾಗವೇಣಿ)
ಸರ್ಕಾರದ ಅಧೀನ ಕಾರ್ಯದರ್ಶಿ-2,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,
(ವೈದ್ಯಕೀಯ ಶಿಕ್ಷಣ)

27 FEB 2015
891

1923

SME - 11134
27-12-14

**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆ, ಬೆಳಗಾವಿ ಇಲ್ಲಿನ ಆರ್ಥಿಕ ಸಲಹೆಗಾರರ ಹುದ್ದೆಯನ್ನು ರಾಜ್ಯ ಲೆಕ್ಕಪತ್ರ ಇಲಾಖೆಯ ವೃಂದ ಬಲಕ್ಕೆ ಸೇರ್ಪಡೆ ಮಾಡುವ ಬಗ್ಗೆ.

---

ಓದಲಾಗಿದೆ:

1. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಸುತ್ತೋಲೆ ಸಂಖ್ಯೆ:ಸಿಆಸುಇ 38 ಎಸ್‌ಎಸ್‌ಆರ್ 85 ದಿನಾಂಕ:13.6.1986.
2. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಸುತ್ತೋಲೆ ಸಂಖ್ಯೆ:ಸಿಆಸುಇ 35 ಎಸ್‌ಎಸ್‌ಆರ್ 90 ದಿನಾಂಕ:1.10.1990.
3. ನಿಯಂತ್ರಕರು, ರಾಜ್ಯ ಲೆಕ್ಕಪತ್ರ ಇಲಾಖೆ ಇವರ ಪತ್ರ ಸಂಖ್ಯೆ: ಸಿಎಸ್‌ಎ 1 ಸಿ&ಆರ್ 2013(ವೃಂದ ಬಲ)/ 3035 ದಿನಾಂಕ:2.12.2014.

ಪ್ರಸ್ತಾವನೆ:

ನಿಯಂತ್ರಕರು, ರಾಜ್ಯ ಲೆಕ್ಕಪತ್ರ ಇಲಾಖೆ ಇವರು ಮೇಲೆ ಓದಲಾದ ಕ್ರಮ ಸಂಖ್ಯೆ(3)ರ ಪತ್ರದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ(ವೈದ್ಯಕೀಯ ಶಿಕ್ಷಣ)ಯು ಆದೇಶ ದಿನಾಂಕ:7.9.2006 ಸಂಖ್ಯೆ:ಆಕುಕ 266 ಎಂಪಿಎಸ್ 2006ಕ್ಕೆ ಸೇರ್ಪಡೆ ದಿ:12.9.2006ರಲ್ಲಿ ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆ, ಬೆಳಗಾವಿ ಇಲ್ಲಿ ಸೃಜನೆಯಾಗಿರುವ ಆರ್ಥಿಕ ಸಲಹೆಗಾರರ ಹುದ್ದೆಯನ್ನು ರಾಜ್ಯ ಲೆಕ್ಕಪತ್ರ ಇಲಾಖೆಯ ಜಂಟಿ ನಿಯಂತ್ರಕರ ವೃಂದದಿಂದ ಭರ್ತಿ ಮಾಡಲಾಗಿದ್ದು, ಈ ಹುದ್ದೆಯನ್ನು ರಾಜ್ಯ ಲೆಕ್ಕಪತ್ರ ಇಲಾಖೆಯ ವೃಂದ ಬಲಕ್ಕೆ ಸೇರ್ಪಡೆ ಮಾಡಿ ಆದೇಶ ಹೊರಡಿಸಲು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಮೇಲೆ ಕ್ರಮ ಸಂಖ್ಯೆ(1) ಮತ್ತು (2)ರಲ್ಲಿ ಓದಲಾದ ಸೂಚನೆಗಳನ್ವಯ ಪರಿಶೀಲಿಸಲಾಯಿತು. ಸದರಿ ಹುದ್ದೆಯನ್ನು ರಾಜ್ಯ ಲೆಕ್ಕಪತ್ರ ಇಲಾಖೆಯ ಹುದ್ದೆಯಿಂದಲೇ ತುಂಬಬೇಕಾಗಿದ್ದು ಅದನ್ನು ವೃಂದ ಬಲಕ್ಕೆ ತಾತ್ಕಾಲಿಕವಾಗಿ ಸೇರಿಸಲು ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರಿ ಆದೇಶ ಸಂಖ್ಯೆ:ಆಇ 19 ರಾಲೆಪ 2014, ಬೆಂಗಳೂರು, ದಿನಾಂಕ:6.12.2014**

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ(ವೈದ್ಯಕೀಯ ಶಿಕ್ಷಣ)ಯು ಆದೇಶ ಸಂಖ್ಯೆ:ಆಕುಕ 266 ಎಂಪಿಎಸ್ 2006 ದಿನಾಂಕ:7.9.2006ರಲ್ಲಿ ಮಂಜೂರಾಗಿರುವ ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆ, ಬೆಳಗಾವಿ ಇಲ್ಲಿನ ಆರ್ಥಿಕ ಸಲಹೆಗಾರರ ಹುದ್ದೆಯನ್ನು ದಿನಾಂಕ:12.9.2006ರಿಂದ ಸೇರ್ಪಡೆಗೊಂಡಂತೆ ರಾಜ್ಯ ಲೆಕ್ಕಪತ್ರ ಇಲಾಖೆಯ ಜಂಟಿ ನಿಯಂತ್ರಕರ ವೃಂದ ಬಲಕ್ಕೆ ಈ ಕೆಳಗಿನಂತೆ ಮುಂದಿನ ಆದೇಶದವರೆಗೆ ತಾತ್ಕಾಲಿಕವಾಗಿ ಸೇರ್ಪಡೆ ಮಾಡಲಾಗಿದೆ.

DS/ME

<u>ಜಂಟಿ ನಿಯಂತ್ರಕರ ವೃಂದ</u>

| ಕ್ರ.ಸಂ. | ಸೃಜನೆಯಾದ ಕಚೇರಿಯ ವಿವರ | ಸೃಜನೆಯಾದ ಆದೇಶ ಸಂಖ್ಯೆ & ದಿನಾಂಕ | ಸೃಜನೆಯಾದ ಹುದ್ದೆಗಳ ಸಂಖ್ಯೆ |
|---|---|---|---|
| 1 | ಆರ್ಥಿಕ ಸಲಹೆಗಾರರು, ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆ, ಬೆಳಗಾವಿ. | ಆದೇಶ ಸಂಖ್ಯೆ:ಆಕುಕ 266 ಎಂಪಿಎಸ್ 2006 ದಿನಾಂಕ:7.9.2006 ಸೇರ್ಪಡೆ ದಿ:12.9.2006. | 01 |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್. ಲಕ್ಷ್ಮಣ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ(ಆಡಳಿತ & ಮುಂಗಡ)

ಪ್ರತಿ:

1. ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ, ಬೆಂಗಳೂರು.
2. ಮಹಾಲೇಖಪಾಲರು(ಎ ಮತ್ತು ಇ) (ಎ ಮತ್ತು ಯು) 1&2, ಕರ್ನಾಟಕ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ (ವೈದ್ಯಕೀಯ ಶಿಕ್ಷಣ), ಬೆಂಗಳೂರು.
4. ನಿಯಂತ್ರಕರು, ರಾಜ್ಯ ಲೆಕ್ಕಪತ್ರ ಇಲಾಖೆ, ಕಾವೇರಿ ಭವನ, ಬೆಂಗಳೂರು.
5. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು.
6. ನಿರ್ದೇಶಕರು, ಬೆಳಗಾವಿ ವೈದ್ಯಕೀಯ ವಿಜ್ಞಾನ ಸಂಸ್ಥೆ, ಬೆಳಗಾವಿ.
7. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.